**Akashvani : Bangalore**
**Regional Bulletin In Kannada**
**24.06.2025 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**24.06.2025 / 18.40 hrs**

**<><*<><>*><>**

<u>ಮುಖ್ಯಾಂಶಗಳು</u>

೧. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಭೇಟಿ ; ರಾಜ್ಯದ ಅನುದಾನ ಸರಿದೂಗಿಸುವಂತೆ ಮನವಿ

೨. ರಾಜ್ಯದ ಮಾವು ಬೆಳೆಗಾರರ ಸಂಕಷ್ಟಕ್ಕೆ ಸ್ಪಂದಿಸಿದ ಕೇಂದ್ರ ಕೃಷಿ ಸಚಿವ - ಮಾವಿಗೆ ಪ್ರತಿ ಕ್ವಿಂಟಾಲ್‌ಗೆ ೧ ಸಾವಿರದ ೬೧೬ ರೂಪಾಯಿ ಪರಿಹಾರ ಘೋಷಣೆ

೩. ತಮ್ಮ ಕ್ಷೇತ್ರದಲ್ಲಿ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿಲ್ಲ ; ಮತ್ತೊಮ್ಮೆ ಸರ್ಕಾರದ ವಿರುದ್ಧ ಶಾಸಕ ರಾಜು ಕಾಗೆ ಅಸಮಾಧಾನ

೪. ರಾಜ್ಯದ ನೇರಳೆಹಣ್ಣು ಜಾಗತಿಕ ಮಾರುಕಟ್ಟೆಗೆ ಲಗ್ಗೆ ; ಲಂಡನ್‌ಗೆ ರಫ್ತು

೫. ರಾಜ್ಯ ಸಚಿವಾಲಯದಿಂದ ಗ್ರಾಮ ಪಂಚಾಯಿತಿವರೆಗೆ ಭ್ರಷ್ಟಾಚಾರ - ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪ

**<><*<><>*><>**

ಮುಖ್ಯಮಂತ್ರಿ ಸಿದ್ದರಾಮಯ್ಯ ನವದೆಹಲಿಯಲ್ಲಿಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ಭೇಟಿಯಾಗಿ ಹಲವು ವಿಷಯಗಳ ಕುರಿತಂತೆ ಚರ್ಚೆ ನಡೆಸಿದರು. ಈ ವೇಳೆ ಅವರು, ೧೫ನೇ ಹಣಕಾಸು ಆಯೋಗದಲ್ಲಿ ರಾಜ್ಯಕ್ಕೆ ಆಗಿರುವ ಅನ್ಯಾಯವನ್ನು ೧೬ನೇ ಹಣಕಾಸು ಆಯೋಗದಲ್ಲಿ ಸರಿದೂಗಿಸುವ ಜೊತೆಗೆ ರಾಜ್ಯದ ಪಾಲನ್ನು ಒದಗಿಸುವಂತೆ ಮನವಿ ಮಾಡಿದರು. ರಾಜ್ಯದ ಅನುದಾನವನ್ನು ಶೀಘ್ರವೇ ಬಿಡುಗಡೆ ಮಾಡುವಂತೆ ತಿಳಿಸಿದ್ದಾರೆ. ಇದಕ್ಕೂ ಮೊದಲು ಮುಖ್ಯಮಂತ್ರಿ ಸಿದ್ದರಾಮಯ್ಯ ರಾಷ್ಟ್ರಪತಿ ಭವನದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿಯಾಗಿ ಅನುಮೋದನೆಗೆ ಬಾಕಿಯಿರುವ ವಿಧೇಯಕಗಳ ಬಗ್ಗೆ ಸಮಾಲೋಚನೆ ನಡೆಸಿದರು. ಈ ವೇಳೆ ಮೈಸೂರು ಪೇಟಾ ಹಾಗೂ ಶ್ರೀಗಂಧದ ಸ್ಮರಣಿಕೆ ನೀಡಿ ಗೌರವಿಸಿದರು.

**<><*<><>*><>**

ರಾಜ್ಯದ ಮಾವು ಬೆಳೆಗಾರರ ಹಿತ ಕಾಪಾಡುವಂತೆ ಕೇಂದ್ರ ಕೈಗಾರಿಕಾ ಸಚಿವ ಹೆಚ್.ಡಿ. ಕುಮಾರಸ್ವಾಮಿ ಮನವಿಗೆ ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಸ್ಪಂದಿಸಿದ್ದಾರೆ. ಮಾರುಕಟ್ಟೆ ಮಧ್ಯಪ್ರವೇಶ ಯೋಜನೆಯಡಿಯಲ್ಲಿ ೨೦೨೫-೨೬ನೇ ಸಾಲಿನಲ್ಲಿ ಕರ್ನಾಟಕದ ಮಾವು ಸಂಗ್ರಹಿಸಲು ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದ್ದಾರೆ. ಕ್ವಿಂಟಾಲ್‌ಗೆ ೧ ಸಾವಿರದ ೬೧೬ ರೂಪಾಯಿ ಬೆಂಬಲ ಬೆಲೆ ಘೋಷಣೆ ಮಾಡಿದ್ದಾರೆ. ೨ ಲಕ್ಷದ ೫೦ ಸಾವಿರ ಮೆಟ್ರಿಕ್ ಟನ್ ಮಾವು ಖರೀದಿಸಲು ಕೇಂದ್ರ ಸರ್ಕಾರ ಅನುಮೋದನೆ ನೀಡಿದೆ. ಕೋಲಾರದ ಶ್ರೀನಿವಾಸಪುರದಲ್ಲಿ ಮಾವಿನ ಬೆಲೆ ಕುಸಿತದಿಂದ ರೈತರು ಸಂಕಷ್ಟ ಅನುಭವಿಸಿದ್ದರು. ಈ ಹಿನ್ನೆಲೆಯಲ್ಲಿ ಮಾವು ಬೆಳೆಗಾರರ ಸಂಕಷ್ಟಕ್ಕೆ ಸ್ಪಂದಿಸಿದ್ದ ಕುಮಾರಸ್ವಾಮಿ ಕೇಂದ್ರ ಕೃಷಿ ಸಚಿವರಿಗೆ ಮನವಿ ಸಲ್ಲಿಸಿದರು.

<><*<><>*><>

ರಾಜ್ಯ ಸರ್ಕಾರದ ವಿರುದ್ಧ ಕಾಂಗ್ರೆಸ್ ಶಾಸಕ ರಾಜು ಕಾಗೆ ಮತ್ತೊಮ್ಮೆ ಅಸಮಧಾನ ಹೊರ ಹಾಕಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಮ್ಮ ಕ್ಷೇತ್ರದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿಲ್ಲ ಎಂದು ದೂರಿದ್ದಾರೆ. ಕಳೆದ ೩೦ ವರ್ಷಗಳಿಂದ ಜನರಿಗಾಗಿ ಸೇವೆ ಸಲ್ಲಿಸುತ್ತಿದ್ದು, ಕಂದಾಯ ಇಲಾಖೆಯ ಪ್ರಧಾನ ಕಾರ್ಯದರ್ಶಿ ರಾಜೇಂದ್ರ ಕುಮಾರ್ ಕಟಾರಿಯಾ ಅವರಿಂದ ಅವಮಾನ ಅನುಭವಿಸಿದ್ದೇನೆ. ಈವರೆಗೆ ಸುಮಾರು ೬೦ ಶಾಸಕರು ಈ ಅಧಿಕಾರಿಯ ವಿರುದ್ಧ ಕ್ರಮ ಕೈಗೊಳ್ಳುವಂತೆ ಮುಖ್ಯಮಂತ್ರಿಗೆ ಪತ್ರ ಬರೆದಿದ್ದಾರೆ. ಆದರೆ ಇನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

<><*<><>*><>

ಕರ್ನಾಟಕದಲ್ಲಿ ಬೆಳೆಯುವ ನೇರಳೆಹಣ್ಣು ಜಾಗತಿಕ ಮಾರುಕಟ್ಟೆಗೆ ಲಗ್ಗೆ ಇಟ್ಟಿದೆ. ಇದೇ ಮೊದಲ ಬಾರಿಗೆ ನೇರಳೆ ಹಣ್ಣನ್ನು ಕರ್ನಾಟಕದಿಂದ ಲಂಡನ್‌ಗೆ ರಫ್ತು ಮಾಡಲಾಗುತ್ತಿದೆ. ದೇಶದ ವಿವಿಧ ಭಾಗಗಳ ಸಾಂಪ್ರದಾಯಿಕ ಹಣ್ಣುಗಳನ್ನು ಜಾಗತಿಕ ಮಾರುಕಟ್ಟೆಗೆ ತಲುಪಿಸುವಲ್ಲಿ ಇದು ಮಹತ್ವದ ಹೆಜ್ಜೆಯಾಗಿದೆ.

<><*<><>*><>

ಗರ್ಭಿಣಿ ಮತ್ತು ತಾಯಂದಿರಿಗೆ ಸರ್ಕಾರದಿಂದ ಸಿಗುವ ಸೌಲಭ್ಯಗಳ ಬಗ್ಗೆ ಅರಿವು ಮೂಡಿಸಬೇಕಿದ್ದು, ಅವರಿಗೆ ಪ್ರೋತ್ಸಾಹಧನದ ಸೌಲಭ್ಯ ಕಲ್ಪಿಸಬೇಕು ಎಂದು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮೀ ಚೌಧರಿ ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ಮಾತನಾಡಿದ ಅವರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿಗಳು ಕ್ರಿಯಾಶೀಲರಾಗಿ ಕೆಲಸ ಮಾಡಬೇಕು. ಸರ್ಕಾರಿ ಆಸ್ಪತ್ರೆಗಳಲ್ಲಿ ರೋಗಿಗಳಿಗೆ ಗುಣಮಟ್ಟದ ಚಿಕಿತ್ಸೆ ನೀಡಬೇಕು ಎಂದು ಸೂಚಿಸಿದ್ದಾರೆ. ಅಂಗನವಾಡಿಯ ಸಹಾಯಕಿಯರು ಮತ್ತು ಆಶಾ ಕಾರ್ಯಕರ್ತೆರು ಗರ್ಭಿಣಿಯರ ಮನೆಗೆ ತೆರಳಿ ಮಾತೃವಂದನಾ ಯೋಜನೆ ಕುರಿತು ಮಾಹಿತಿ ನೀಡಬೇಕು ಎಂದು ನಿರ್ದೇಶನ ನೀಡಿದ್ದಾರೆ.

<><*<><>*><>

ರಾಜ್ಯ ಕಾಂಗ್ರೆಸ್ ಸರ್ಕಾರದಲ್ಲಿ ಭ್ರಷ್ಟಾಚಾರ ತುಂಬಿ ತುಳುಕುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಚಿವಾಲಯದಿಂದ ಗ್ರಾಮ ಪಂಚಾಯಿತಿ ಕಚೇರಿಗಳವರೆಗೆ ಲಂಚ ನೀಡದೇ ಯಾವುದೇ ಕೆಲಸವಾಗುವುದಿಲ್ಲ ಎಂದು ದೂರಿದ್ದಾರೆ. ರಾಜ್ಯದಲ್ಲಿ ಯಾವುದೇ ಅಭಿವೃದ್ಧಿ ನಡೆಯುತ್ತಿಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯ ಆಡಳಿತದ ಮೇಲೆ ಸಂಪೂರ್ಣವಾಗಿ ನಿಯಂತ್ರಣ ಕಳೆದುಕೊಂಡಿದ್ದಾರೆ ಎಂದು ತಿಳಿಸಿದ್ದಾರೆ.

<><*<><>*><>

ತೀವ್ರ ಅನಾರೋಗ್ಯದಿಂದ ಬಳಲುತ್ತಿರುವ ಹಿರಿಯ ಸಾಹಿತಿ ಹಾಗೂ ವಿಧಾನಪರಿಷತ್ತಿನ ಮಾಜಿ ಸದಸ್ಯ ಪ್ರೊ. ದೊಡ್ಡ ರಂಗೇಗೌಡ ಅವರನ್ನು ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ ತಂಗಡಗಿ ಭೇಟಿ ಮಾಡಿ ಆರೋಗ್ಯ ವಿಚಾರಿಸಿದರು. ವೈದ್ಯರಲ್ಲಿ ದೊಡ್ಡ ರಂಗೇಗೌಡರ ಆರೋಗ್ಯ ಪರಿಸ್ಥಿತಿ ಬಗ್ಗೆ ಸಂಪೂರ್ಣ ಮಾಹಿತಿ ಪಡೆದ ಸಚಿವ ಶಿವರಾಜ ತಂಗಡಗಿ ಅವರ ವೈದ್ಯಕೀಯ ವೆಚ್ಚವನ್ನು

ಸಂಪೂರ್ಣವಾಗಿ ಸರ್ಕಾರದಿಂದಲೇ ಭರಿಸುವುದಾಗಿ ತಿಳಿಸಿದರು. ಅವರಿಗೆ ಅಗತ್ಯವಿರುವ ಎಲ್ಲಾ ವೈದ್ಯಕೀಯ ಸೌಲಭ್ಯವನ್ನು ಒದಗಿಸಲು ವೈದ್ಯರಿಗೆ ಸೂಚಿಸಿದರು.

**<><*<><>*><>**

ಹಾಸನ ಜಿಲ್ಲೆಯಲ್ಲಿ ಮೆಕ್ಕೆಜೋಳ ಬೆಳೆಗೆ ಆವರಿಸಿರುವ ಬಿಳಿ ಸುಳಿ ರೋಗದ ಅಧ್ಯಯನಕ್ಕಾಗಿ ಕೇಂದ್ರ ಕೃಷಿ ಇಲಾಖೆಯ ತಜ್ಞರ ತಂಡವೊಂದು ಹಾಸನಕ್ಕೆ ಇಂದು ಭೇಟಿ ನೀಡಿ ಪರಿಶೀಲನೆ ನಡೆದಿದೆ. ನಾಲ್ಕು ದಿನಗಳ ಹಿಂದೆ ಸಂಸದ ಶ್ರೇಯಸ್ ಪಟೇಲ್, ಕೇಂದ್ರ ಕೃಷಿ ಸಚಿವರಿಗೆ ಮನವಿ ಸಲ್ಲಿಸಿ ರೋಗದ ಬಗ್ಗೆ ಅಧ್ಯಯನ ಮಾಡಿ ರೋಗಕ್ಕೆ ಕಾರಣ ಹಾಗೂ ಅದರ ಬಗ್ಗೆ ಮಾಹಿತಿ ನೀಡಲು ಮನವಿ ಮಾಡಿದ್ದರು. ಈ ಹಿನ್ನೆಲೆಯಲ್ಲಿ ಇಂದು ಹಾಸನಕ್ಕೆ ಆಗಮಿಸಿದ ತಂಡವು ಹೊಳೆನರಸೀಪುರ, ಆಲೂರು, ಬೇಲೂರು, ಚನ್ನರಾಯಪಟ್ಟಣ, ಅರಸೀಕೆರೆ ಸೇರಿದಂತೆ ವಿವಿಧ ತಾಲೂಕುಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿತು. ಮೆಕ್ಕೆಜೋಳ ಬೆಳೆಗಾರರೊಂದಿಗೆ ಸಂವಾದ ನಡೆಸಿದ ತಜ್ಞರ ತಂಡ ಹಾನಿಗೊಳಗಾದ ಸಸ್ಯಗಳ ಮಾದರಿಗಳನ್ನು ಪ್ರಯೋಗಾಲಯ ವಿಶ್ಲೇಷಣೆಗಾಗಿ ಸಂಗ್ರಹಿಸಿದೆ. ಸುದ್ದಿಗಾರರೊಂದಿಗೆ ಮಾತನಾಡಿದ ಸಂಸದ ಶ್ರೇಯಸ್ ಪಟೇಲ್ ವಿಜ್ಞಾನಿಗಳ ತಂಡವು ರೋಗದ ನಿಖರ ಕಾರಣ ಗುರುತಿಸುವ ನಿರೀಕ್ಷೆಯಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಧ್ವನಿ : ಎಂ.ಪಿ. ಶ್ರೇಯಸ್ ಪಟೇಲ್

**<><*<><>*><>**

ಶಿವಮೊಗ್ಗದ ತೀರ್ಥಹಳ್ಳಿ ತಾಲ್ಲೂಕಿನ ಮೇಗರವಳ್ಳಿಯ ಸುಶಾಂತ್ ಎನ್. ಪ್ರಭುಗೆ ಉತ್ತರ ಪ್ರದೇಶದ ಐಐಟಿ-ಕಾನ್ಪುರದಲ್ಲಿ ಓದುವ ಅವಕಾಶ ದೊರೆತಿದೆ. ದ್ವಿಚಕ್ರ ವಾಹನ ಮೆಕ್ಯಾನಿಕ್‌ರೊಬ್ಬರ ಪುತ್ರನಾದ ಸುಶಾಂತ್ ಪ್ರತಿಷ್ಠಿತ ಸಂಸ್ಥೆಯಲ್ಲಿ ಬಿ.ಟೆಕ್ ಅಧ್ಯಯನ ಮಾಡಲಿದ್ದಾರೆ. ಸುಶಾಂತ್ ಎಸ್‌ಎಸ್‌ಎಲ್‌ಸಿವರೆಗೆ ಸರ್ಕಾರಿ ಶಾಲೆಯಲ್ಲಿ ಓದಿದ್ದು, ಚಿಕ್ಕ ವಯಸ್ಸಿನಲ್ಲೇ ಸಣ್ಣ-ಸಣ್ಣ ರಿಪೇರಿ ಕೆಲಸಗಳಲ್ಲಿ ತೊಡಗುತ್ತಿದ್ದರು. ೨೦೨೨ರಲ್ಲಿ ಬೈಕ್‌ಗಳಿಗಾಗಿ ಸೆಲ್ಫ್-ಚೈನ್ ಅಡ್ಜಸ್ಟ್‌ಮೆಂಟ್ ಸಿಸ್ಟಮ್ ಅಭಿವೃದ್ಧಿಪಡಿಸಿ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ನ್ಯಾಷನಲ್ ಇನ್ನೋವೇಶನ್ ಫೌಂಡೇಶನ್ ಆಯೋಜಿಸಿದ್ದ ಇನ್‌ಸ್ಪೈರ್ ಅವಾರ್ಡ್ಸ್ ಮಾನಕ್ ಎಂಬ ರಾಷ್ಟ್ರಮಟ್ಟದ ಪ್ರದರ್ಶನ ಮತ್ತು ಸ್ಪರ್ಧೆಗೆ ಅವರ ಯೋಜನೆಯನ್ನು ಆಯ್ಕೆ ಮಾಡಲಾಗಿತ್ತು. ಸುಶಾಂತ್ ಹತ್ತನೇ ತರಗತಿಯಲ್ಲಿ ೬೨೫ ರಲ್ಲಿ ೬೨೦ ಅಂಕಗಳನ್ನು ಪಡೆದಿದ್ದರು. ಐಐಟಿ ಕಾನ್ಪುರದಲ್ಲಿ ಓದಲು ಅವಕಾಶ ಸಿಕ್ಕಿರುವ ಬಗ್ಗೆ ಆಕಾಶವಾಣಿಯೊಂದಿಗೆ ಸಂತಸ ಹಂಚಿಕೊಂಡಿದ್ದಾರೆ.

ಧ್ವನಿ : ಸುಶಾಂತ್

**<><*<><>*><>**

ರಾಷ್ಟ್ರೀಯ ಹೆದ್ದಾರಿ, ರಾಜ್ಯ ಹೆದ್ದಾರಿ ಹಾಗೂ ಜಿಲ್ಲಾ ರಸ್ತೆಗಳ ಮೇಲಿನ ಗುಂಡಿಗಳನ್ನು ಗುರುತಿಸಿ ಶೀಘ್ರವೇ ಮುಚ್ಚುವ ಮೂಲಕ ಅವಘಡಗಳನ್ನು ತಪ್ಪಿಸಬೇಕು ಎಂದು ವಿಜಯನಗರ ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮಳೆಯಿಂದಾಗಿ ರಸ್ತೆಗಳ ಮೇಲೆ ನೀರು ನಿಂತು ಗುಂಡಿಗಳು ಕಾಣದೇ ಸವಾರರು ಕಷ್ಟ ಅನುಭವಿಸುತ್ತಿದ್ದಾರೆ. ವೈಜ್ಞಾನಿಕವಾಗಿ ರಸ್ತೆ ನಿರ್ಮಾಣ ಕಾಮಗಾರಿಗಳು ನಡೆಯದೇ ಅನೇಕ ದುರ್ಘಟನೆಗಳು ಸಂಭವಿಸಿವೆ. ಇನ್ನಾದರೂ ಎಚ್ಚೆತ್ತು ಅಧಿಕಾರಿಗಳು ರಸ್ತೆಗಳ ನಿರ್ವಹಣೆಗೆ ಕಾರ್ಯೋನ್ಮುಖರಾಗಬೇಕು ಎಂದು ತಿಳಿಸಿದ್ದಾರೆ. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ

ಶ್ರೀಹರಿಬಾಬು.ಬಿ.ಎಲ್ ಮಾತನಾಡಿ, ಹೊಸಪೇಟೆ ನಗರದ ರಾಷ್ಟ್ರೀಯ ಹೆದ್ದಾರಿ-೫೦ ರಲ್ಲಿ ಬರುವ ಸುರಂಗ ಮಾರ್ಗದಲ್ಲಿ ಸಿಸಿ ಕ್ಯಾಮರಾಗಳನ್ನು ಅಳವಡಿಸಬೇಕು ಎಂದು ಸೂಚಿಸಿದ್ದಾರೆ.

**<><*<><>*><>**

ಇನ್ನು ಹವಾವರ್ತಮಾನ

ರಾಜ್ಯದ ಕರಾವಳಿಯಲ್ಲಿ ನೈಋತ್ಯ ಮುಂಗಾರು ಸಾಮಾನ್ಯವಾಗಿತ್ತು. ಒಳನಾಡಿನಲ್ಲಿ ದುರ್ಬಲವಾಗಿತ್ತು. ಕರಾವಳಿಯ ಹೆಚ್ಚಿನ ಸ್ಥಳಗಳಲ್ಲಿ, ದಕ್ಷಿಣ ಒಳನಾಡಿನ ಕೆಲವು ಸ್ಥಳಗಳಲ್ಲಿ ಹಾಗೂ ಉತ್ತರ ಒಳನಾಡಿನ ಒಂದೆರೆಡು ಸ್ಥಳಗಳಲ್ಲಿ ಇಂದು ಮಳೆಯಾಗಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ. ಉಡುಪಿ ಜಿಲ್ಲೆಯಲ್ಲಿ ಅತಿಹೆಚ್ಚು ೧೩ ಸೆಂಟಿ ಮೀಟರ್ ಮಳೆಯಾಗಿದೆ. ಕ್ಯಾಸಲ್ ರಾಕ್, ಖಾನಾಪುರ ೧೦ ಡಿಗ್ರಿ ಸೆಲ್ಸಿಯಸ್, ಆಗುಂಬೆ ೯, ಲೋಂಡಾ, ಕದ್ರಾ ಜಿಲ್ಲೆಗಳಲ್ಲಿ ತಲಾ ೮, ಸೋಮವಾರ ಪೇಟೆ ೭ ಸೆಂಟಿ ಮೀಟರ್ ಡಿಗ್ರಿ ಸೆಲ್ಸಿಯಸ್ ಮಳೆಯಾಗಿದೆ. ಮುಂದಿನ ಮೂರು ದಿನಗಳ ಕಾಲ ಕರಾವಳಿಯಲ್ಲಿ ಮಳೆಯಾಗುವ ಸಾಧ್ಯತೆಯಿದೆ. ಮುಂದಿನ ೨೪ ಗಂಟೆಗಳಲ್ಲಿ ಬೆಂಗಳೂರು ಸುತ್ತಮುತ್ತ ಸಾಮಾನ್ಯವಾಗಿ ಮೋಡ ಕವಿದ ವಾತಾವರಣ. ಗಾಳಿಯೊಂದಿಗೆ ಹಗುರ ಮಳೆಯಾಗುವ ಸಾಧ್ಯತೆಯಿದೆ.

**<><*<><>*><>**

**ಸಂಕ್ಷಿಪ್ತ ಸುದ್ದಿಗಳು**

೧. ಬೆಳಗಾವಿ ಜಿಲ್ಲೆಯಲ್ಲಿ ಕಳೆದ ಎರಡು-ಮೂರು ದಿನಗಳಿಂದ ನಿರಂತರವಾಗಿ ಮಳೆ ಸುರಿಯುತ್ತಿದ್ದು, ನಾಳೆ ಬೆಳಗಾವಿ ಮತ್ತು ಖಾನಾಪುರ ತಾಲ್ಲೂಕಿನ ಅಂಗನವಾಡಿ ಕೇಂದ್ರಗಳು, ಸರಕಾರಿ, ಅನುದಾನಿತ ಹಾಗೂ ಅನುದಾನರಹಿತ ಪ್ರಾಥಮಿಕ ಶಾಲೆ, ಪ್ರೌಢಶಾಲೆಗಳು ಮತ್ತು ಪದವಿಪೂರ್ವ ಕಾಲೇಜುಗಳಿಗೆ ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ರಜೆ ಘೋಷಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**